ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ನ್ಯಾಯಾಲಯ, ಕೆಜಿಎಫ್

ಸಿ.ಸಿ.ನಂ.837/2023

ಚಾಸಾ:16 ಪ್ರಾಸಾ:11

ದಿನಾಂಕಃ 06.01.2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

| | |
|---|---|
| ಸಾಕ್ಷಿದಾರರ ಹೆಸರು– | ಮೂರ್ತಿ |
| ತಂದೆಯ ಹೆಸರು– | ತಿರುಮಲಯ್ಯ |
| ವಯಸ್ಸು – | 45 ವರ್ಷ |
| ಉದ್ಯೋಗ– | ಪಿ.ಎಸ್.ಐ, ತಿರುವೆಕೆರೆ ಪೋಲೀಸ್ ಠಾಣೆ |
| ವಾಸ– | ತಿರುವೆಕೆರೆ |

**( ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ )**

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ರವರಿಂದಃ**

1. ನಾನು ದಿನಾಂಕ 01.02.2023 ರಿಂದ 06.06.2023 ರವರೆಗೆ ಆರ್ ಪೇಟೆ ಪೋಲೀಸ್ ಠಾಣೆಯಲ್ಲಿ ಪಿ.ಎಸ್.ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

2. ದಿನಾಂಕ 01.02.2023 ರಂದು ಚಾಸಾ–15 ರವರಿಂದ ಪ್ರಕರಣದ ಕಡತವನ್ನು ಸ್ವೀಕರಿಸಿ ಮುಂದಿನ ತನಿಖೆಯನ್ನು ಕೈಗೊಂಡಿರುತ್ತೇನೆ. ದಿನಾಂಕ 30.03.2023 ರಂದು ಚಾಸಾ–11 ರವರಿಂದ ಐ.ಎಂ.ವಿ. ವರದಿಯನ್ನು ಪಡೆದುಕೊಂಡಿರುತ್ತೇನೆ. ಸದರಿ ವರದಿಯನ್ನು ನಿಪಿ–16 ಹಾಗೂ ಸಾಕ್ಷಿಯ ಸಹಿಯನ್ನು ನಿಪಿ–16(ಎ) ಎಂದು ಗುರುತಿಸಲಾಯಿತು. ದಿನಾಂಕ 09.05.2023 ರಂದು ನ್ಯಾಯಾಲಯದ ಆದೇಶದ ಮೇರೆಗೆ ಪಂಚರ ಸಮಕ್ಷಮ ಮಧ್ಯಾಹ್ನ 1.00 ರಿಂದ 1.30 ಗಂಟೆಯವರೆಗೆ ನಿಪಿ–13 ರಂತೆ ಪಂಚನಾಮೆ ಮಾಡಿ ವಾಹನವನ್ನು ಆರೋಪಿಗೆ ಬಿಟ್ಟಿರುತ್ತೇನೆ. ನಿಪಿ–13 ರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ–13(ಸಿ) ಎಂದು ಗುರುತಿಸಲಾಯಿತು. ಆ ಸಮಯದಲ್ಲಿ ಛಾಯಾ ಚಿತ್ರಗಳನ್ನು ತೆಗೆಸಿರುತ್ತೇನೆ. ಸದರಿ ಛಾಯಾ ಚಿತ್ರಗಳನ್ನು ಈಗಾಗಲೇ ನಿಪಿ–8 ರಿಂದ 11 ಎಂದು ಗುರುತಿಸಲಾಗಿದೆ. ನ್ಯಾಯಾಲಯದ ಮುಂದೆ ಇರುವ ಆರೋಪಿಯನ್ನು ಸಾಕ್ಷಿ ನೋಡಿ ಗುರುತಿಸಿರುತ್ತಾರೆ. ತನಿಖೆಯನ್ನು ಪೂರ್ಣಗೊಳಿಸಿ ಆರೋಪಿಯ ವಿರುದ್ಧ ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿರುತ್ತೇನೆ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದಃ**

3. ದಿನಾಂಕ **09.05.2023** ರಂದು ನಾನು ಆರೋಪಿಗೆ ಸಂಬಂಧಿಸಿದ ದ್ವಿಚಕ್ರ ವಾಹನವನ್ನು ಬಿಟ್ಟಿರುತ್ತೇನೆ. ಚಾಸಾ–**1** ರವರಿಗೆ ಸಹಾಯ ಮಾಡುವ ಸಲುವಾಗಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ** ಇಲ್ಲ

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆ ಮೇರೆಗೆ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿ ಇದೆ

(ಜಯಲಕ್ಷ್ಮೀ ಎನ್.ಬಿ)
ಪ್ರಧಾನ ಹಿರಿಯ ಸಿ.ಜೆ. ಮತ್ತು ಜೆಎಂಎಫ್‌ಸಿ
ಕೆಜಿಎಫ್

# ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ನ್ಯಾಯಾಲಯ, ಕೆಜಿಎಫ್

## ಸಿ.ಸಿ.ನಂ.837/2023

ಚಾಸಾ:15 ಪ್ರಾಸಾ:10

ದಿನಾಂಕಃ 06.01.2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

| | |
|---|---|
| ಸಾಕ್ಷಿದಾರರ ಹೆಸರು- | ಶ್ರುತಿ |
| ಗಂಡನ ಹೆಸರು- | ಅಮರ್ |
| ವಯಸ್ಸು - | 34 ವರ್ಷ |
| ಉದ್ಯೋಗ- | ಪಿ.ಎಸ್.ಐ, ಪಿ.ಟಿ.ಸಿ., ಕಲಬುರ್ಗಿ ಮಹಾ ವಿದ್ಯಾಲಯ |
| ವಾಸ- | ಕಲಬುರ್ಗಿ |

**(ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ)**

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ರವರಿಂದಃ**

1. ನಾನು ನವೆಂಬರ್ 2020 ರಿಂದ ಜನವರಿ 2023 ರವರೆಗೆ ಆರ್ ಪೇಟೆ ಪೋಲೀಸ್ ಠಾಣೆಯಲ್ಲಿ ಪಿ.ಎಸ್.ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

2. ದಿನಾಂಕ 16.11.2022 ರಂದು ಚಾಸಾ-14 ರವರಿಂದ ಪ್ರಕರಣದ ಕಡತವನ್ನು ಸ್ವೀಕರಿಸಿ ಮುಂದಿನ ತನಿಖೆಯನ್ನು ಕೈಗೊಂಡಿರುತ್ತೇನೆ. ಅದೇ ದಿನ ಚಾಸಾ-13 ರವರಿಂದ ಐ.ಎಂ.ವಿ. ವರದಿಯನ್ನು ಪಡೆದುಕೊಂಡಿರುತ್ತೇನೆ. ಸದರಿ ವರದಿಯನ್ನು ನಿಪಿ-15 ಹಾಗೂ ಸಾಕ್ಷಿಯ ಸಹಿಯನ್ನು ನಿಪಿ-15(ಎ) ಎಂದು ಗುರುತಿಸಲಾಯಿತು. ದಿನಾಂಕ 22.11.2022 ರಂದು ನ್ಯಾಯಾಲಯದ ಆದೇಶದ ಮೇರೆಗ ವಾಹನವನ್ನು ಚಾಸಾ-1 ರವರಿಗೆ ಬಿಟ್ಟು ಕೊಟ್ಟಿರುತ್ತೇನೆ ಹಾಗೂ ಆ ಸಮಯದಲ್ಲಿ ಛಾಯಾ ಚಿತ್ರಗಳನ್ನು ತೆಗೆಸಿರುತ್ತೇನೆ. ಸದರಿ ಛಾಯಾ ಚಿತ್ರಗಳನ್ನು ಈಗಾಗಲೇ ನಿಪಿ-4 ರಿಂದ 7 ಎಂದು ಗುರುತಿಸಲಾಗಿದೆ. ಆರೋಪಿ ಹಾಗೂ ವಾಹನ ಇರುವ ಛಾಯಾ ಚಿತ್ರವನ್ನು ಸಾಕ್ಷಿ ನೋಡಿ ಗುರುತಿಸಿರುತ್ತಾರೆ. ಸದರಿ ಛಾಯಾ ಚಿತ್ರಗಳನ್ನು ಈಗಾಗಲೇ ನಿಪಿ-8 ರಿಂದ 11 ಎಂದು ಗುರುತಿಸಲಾಗಿದೆ. ದಿನಾಂಕ 27.11.2022 ರಂದು ಆರೋಪಿಗೆ ಸಂಬಂಧಿಸಿದ ದ್ವಿಚಕ್ರ ವಾಹನ ಸಂಖ್ಯೆ ಕೆಎ 01 ಹೆಚ್ ಪಿ9595 ವಾಹನವನ್ನು ನಿಪಿ-12 ರಂತೆ ಚಾಸಾ-8 ಮತ್ತು 9 ರವರ ಸಮಕ್ಷಮ ಅಮಾನತ್ತುಪಡಿಸಿಕೊಂಡಿರುತ್ತೇನೆ. ನಿಪಿ-12 ರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-12(ಸಿ) ಎಂದು ಗುರುತಿಸಲಾಯಿತು. ನಿಪಿ-12 ಅಮಾನತ್ತು ಪಂಚನಾಮೆಯನ್ನು ಚಾಸಾ-13 ರವರು ಬೆರಳಚ್ಚು ಮಾಡಿರುತ್ತಾರೆ. ಅಮಾನತ್ತುಪಡಿಸಿಕೊಂಡಂತಹ ಮಾಲನ್ನು ಮಾಲುಪಟ್ಟಿಯಲ್ಲಿ ಅಳವಡಿಸಿರುತ್ತೇನೆ. ಮುಂದಿನ

ತನಿಖೆಗಾಗಿ ಕಡತವನ್ನು ಚಾಸಾ-16 ರವರಿಗೆ ವಹಿಸಿಕೊಟ್ಟಿರುತ್ತೇನೆ. ನ್ಯಾಯಾಲಯದ ಮುಂದೆ ಇರುವ ಆರೋಪಿಯನ್ನು ಸಾಕ್ಷಿ ನೋಡಿ ಗುರುತಿಸಿರುತ್ತಾರೆ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದಃ**

3. ಆರೋಪಿಗೆ ಸಂಬಂಧಿಸಿದ ದ್ವಿಚಕ್ರ ವಾಹನವನ್ನು ನಾನು ಬಿಟ್ಟಿರುವುದಿಲ್ಲ. ನಾನು ಚಾಸಾ-1 ರವರಿಗೆ ವಾಹನವನ್ನು ಬಿಟ್ಟಿರುವುದಿಲ್ಲ ಎಂದರೆ ಸುಳ್ಳು. ಚಾಸಾ-1 ರವರಿಗೆ ಸಹಾಯ ಮಾಡುವ ಸಲುವಾಗಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ** ಇಲ್ಲ

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆ ಮೇರೆಗೆ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿ ಇದೆ

(ಜಯಲಕ್ಷ್ಮೀ ಎನ್.ಬಿ)
ಪ್ರಧಾನ ಹಿರಿಯ ಸಿ.ಜೆ. ಮತ್ತು ಜೆಎಂಎಫ್‌ಸಿ
ಕೆಜಿಎಫ್